# ಸೆನೆಗಲ್ ಗಣರಾಜ್ಯದ ಅಧ್ಯಕ್ಷರೊಂದಿಗೆ ಪ್ರಧಾನ ಮಂತ್ರಿಯ ಸಭೆ

ಆಗಸ್ಟ್24, 2023

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು 24 ಆಗಸ್ಟ್ 2023 ರಂದು ಜೋಹಾನ್ಸ್‌ಬರ್ಗ್‌ನಲ್ಲಿ 15 ನೇ ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ಸೆನೆಗಲ್ ಗಣರಾಜ್ಯದ ಅಧ್ಯಕ್ಷರಾದ ಹೆಚ್ .ಈ ಶ್ರೀ ಮ್ಯಾಕಿ ಸಾಲ್ ಅವರನ್ನು ಭೇಟಿಯಾದರು.

2. ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ ಮತ್ತು ಭದ್ರತೆ, ಇಂಧನ, ಗಣಿಗಾರಿಕೆ, ಕೃಷಿ, ಔಷಧೀಯ, ರೈಲ್ವೇ, ಸಾಮರ್ಥ್ಯ ವರ್ಧನೆ, ಸಂಸ್ಕೃತಿ ಮತ್ತು ಜನರೊಂದಿಗೆ ಜನರ ಬಾಂಧವ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ತಮ್ಮ ದ್ವಿಪಕ್ಷೀಯ ಪಾಲುದಾರಿಕೆಯನ್ನು ಗಾಢವಾಗಿಸುವ ಮಾರ್ಗಗಳ ಕುರಿತು ಇಬ್ಬರೂ ನಾಯಕರು ಫಲಪ್ರದ ಚರ್ಚೆ ನಡೆಸಿದರು.

3. ವಾಯ್ಸ್ ಆಫ್ ಗ್ಲೋಬಲ್ ಸೌತ್ ಶೃಂಗಸಭೆಯಲ್ಲಿ ಭಾಗವಹಿಸಿದ್ದಕ್ಕಾಗಿ ಮತ್ತು ಕಳೆದ ವರ್ಷ ಆಫ್ರಿಕಾ ಒಕ್ಕೂಟಕ್ಕೆ ಅವರ ಬಲವಾದ ನಾಯಕತ್ವಕ್ಕಾಗಿ ಅಧ್ಯಕ್ಷ ಸಾಲ್ ಅವರನ್ನು ಪ್ರಧಾನ ಮಂತ್ರಿ ಶ್ಲಾಘಿಸಿದರು.

4. ಅಧ್ಯಕ್ಷ ಸಾಲ್ ಅವರು ಚಂದ್ರಯಾನ ಮಿಷನ್‌ನ ಯಶಸ್ಸಿಗೆ ಪ್ರಧಾನ ಮಂತ್ರಿಯನ್ನು ಅಭಿನಂದಿಸಿದರು ಮತ್ತು ಆಫ್ರಿಕನ್ ಯೂನಿಯನ್‌ನ G20 ನ ಶಾಶ್ವತ ಸದಸ್ಯತ್ವಕ್ಕಾಗಿ ಭಾರತದ ಪ್ರಯತ್ನಗಳಿಗೆ ಕೃತಜ್ಞತೆಯನ್ನು ವ್ಯಕ್ತಪಡಿಸಿದರು. ಅಭಿವೃದ್ಧಿಶೀಲ ರಾಷ್ಟ್ರಗಳ ಆದ್ಯತೆಗಳನ್ನು ಪ್ರತಿಪಾದಿಸುವಲ್ಲಿ ಪ್ರಧಾನಿಯವರ ನಾಯಕತ್ವವನ್ನು ಅವರು ಶ್ಲಾಘಿಸಿದರು ಮತ್ತು ಭಾರತದ ಅಧ್ಯಕ್ಷತೆಯಲ್ಲಿ ಮುಂಬರುವ G20 ಶೃಂಗಸಭೆಯ ಯಶಸ್ಸಿಗೆ ತಮ್ಮ ಶುಭಾಶಯಗಳನ್ನು ತಿಳಿಸಿದರು.

**ಜೋಹಾನ್ಸ್‌ಬರ್ಗ್**
**ಆಗಸ್ಟ್ 24, 2023**